**ಸಾಕ್ಷಿಯನ್ನು ದಿಃ 19.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

1. ನನ್ನ ಪ್ರಮಾಣ ಪತ್ರದ ವಿವರಗಳನ್ನು ತಿಳಿದುಕೊಂಡಿದ್ದೇನೆ. ಎಫ್.ಐ.ಆರ್ 2 ವಾಹನಗಳ ಮೇಲೆ ಆಗಿದೆ ಎಂದರೆ ನಾನು ನೋಡಿಲ್ಲ. ನಾನು Duplicate ಔಷಧಿ ಬಿಲ್ಲುಗಳನ್ನು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಅಕೌಂಟ್ ಸ್ಟೇಟ್ ಮೆಂಟ್ ಹಾಜರುಪಡಿಸಿದ್ದೇನೆ. ಮೃತನು ಮಧ್ಯಪಾನ ಮಾಡಿದ್ದಾನೆ ಎಂದು ಹೇಳಿದ್ದು ಆ ಬಗ್ಗೆ ದಾಖಲೆ ಹಾಜರುಪಡಿಸಿಲ್ಲ. ವೈದ್ಯರು ಆ ಬಗ್ಗೆ ಪರೀಕ್ಷಿಸಿ ದಾಖಲೆ ಮಾಡಲು ನಿರಾಕರಿಸಿರುತ್ತಾರೆ. ತನಿಖೆಯ ನಂತರ ಪೋಲಿಸರು ನಮ್ಮ ವಾಹನದ ಮೇಲೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದಾರೆ ಎಂದರೆ ಸರಿ. ಆ ಸಂದರ್ಭದಲ್ಲಿ ನಮ್ಮ ವಾಹನಕ್ಕೆ ವಿಮೆ ಇರಲಿಲ್ಲ ಎಂದರೆ ಸರಿ. ಭಾಧ್ಯತೆಯಿಂದ ತಪ್ಪಿಸಿಕೊಳ್ಳಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1 ಮತ್ತು 2 ನೇ ಎದುರುದಾರರ ಪರ ವಕೀಲರಿಂದಃ**

1 ಮತ್ತು 2 ನೇ ಎದುರುದಾರರು ಹಾಗೂ ಅವರ ಪರ ವಕೀಲರನ್ನು ಕೂಗಿ ಕರೆಯಲಾಗಿ ಗೈರು ಹಾಜರಿದ್ದು ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.